145 ಲಿಖಿತ
ಶ್ರೀ ~~112~~ 145
ನಿ-72 ಉಪಯೋಗ

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪಿ.ಆರ್. ರಮೇಶ್, ಶ್ರೀ ಎಂ. ನಾರಾಯಣಸ್ವಾಮಿ, ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ, ಶ್ರೀ ಯು.ಬಿ. ವೆಂಕಟೇಶ್, ಶ್ರೀ ಅರವಿಂದ ಕುಮಾರ್ ಅರಳಿ ಹಾಗೂ ಇತರರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ:** ಪ್ರಜಾ ಪ್ರಭುತ್ವದ ವ್ಯವಸ್ಥೆಯಲ್ಲಿ ಜನರ ಧ್ವನಿ ಹಾಗೂ ಪ್ರತಿಭಟನೆಗಳನ್ನು ಆಲಿಸಿ, ಪರಿಹಾರ ನೀಡುವುದು ಸರ್ಕಾರದ ನಡೆಸುವ ಪಕ್ಷಗಳ ಜವಾಬ್ದಾರಿ ಹಾಗೂ ಕರ್ತವ್ಯವಾಗುತ್ತದೆ. ಯಾವುದೇ ಜನ ವಿರೋಧ ನೀತಿಗಳು ಹಾಗೂ ಕಾರ್ಯಕ್ರಮಗಳನ್ನು ಜನಪರವಾಗಿ ಪ್ರತಿಭಟಿಸುವುದು ಪ್ರತಿಯೊಬ್ಬರ ಸಂವಿಧಾನದ ಹಕ್ಕು ರಾಜಕೀಯವಾಗಿ ಆಡಳಿತ ರೂಢ ಪಕ್ಷಗಳು ಕಾನೂನನ್ನು ದುರ್ಬಳಕೆ ಮಾಡಿಕೊಂಡು ವಿರೋಧ ಪಕ್ಷಗಳನ್ನು ಗುರಿಪಡಿಸುವುದು ಪ್ರಜಾಪ್ರಭುತ್ವದಲ್ಲಿ ಖೇದಕರ. ದಿನಾಂಕ 11-06-2021 ರಂದು ಭಾರತೀಯ ಕಾಂಗ್ರೆಸ್ ಪಕ್ಷ ಪೆಟ್ರೋಲ್, ಡೀಸೆಲ್ ಮತ್ತು ಇನ್ನಿತರ ಬೆಲೆ ಏರಿಕೆಗಳ ವಿರುದ್ಧ ಕೆಲವು ಘಂಟೆಗಳ ಕಾಲ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಪ್ರತಿಭಟಿಸಿದ ಸಂದರ್ಭಗಳಲ್ಲಿ ಕೆಲವು ಕಾಂಗ್ರೆಸ್ ನಾಯಕರುಗಳ ಹಾಗೂ ಕಾರ್ಯಕರ್ತರುಗಳ ಮೇಲೆ ಪೊಲೀಸ್ ಇಲಾಖೆಯಿಂದ ಡಿಸಾಸ್ಟರ್ ಮ್ಯಾನೇಜ್‌ಮೆಂಟ್ (Disaster Management) ಕಾಯ್ದೆಯಡಿಯಲ್ಲಿ ವಿನಾಕಾರಣ ಖಾಸಗಿ ದೂರನ್ನು ದಾಖಲಿಸಿರುವುದು ಖಂಡನೀಯ. ಈ ಕೂಡಲೇ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ದಾಖಲಿಸಿರುವ ಖಾಸಗಿ ದೂರನ್ನು ಕೂಡಲೇ ಹಿಂಪಡೆಯುವ ಕುರಿತು.

**ಉತ್ತರ:** ಭಾರತೀಯ ಕಾಂಗ್ರೆಸ್ ಪಕ್ಷ ಪೆಟ್ರೋಲ್, ಡೀಸೆಲ್ ಮತ್ತು ಇನ್ನಿತರ ಬೆಲೆ ಏರಿಕೆಗಳ ವಿರುದ್ಧ ದಿನಾಂಕ 11.06.2021 ರಂದು ಕೆಲವು ಘಂಟೆಗಳ ಕಾಲ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಪ್ರತಿಭಟಿಸಿದ ಸಂದರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳದೆ ಮತ್ತು ಮಾಸ್ಕ್ ಧರಿಸದೆ ಕೋವಿಡ್-19 ನಿಯಮಗಳನ್ನು ಉಲ್ಲಂಘಿಸಿರುತ್ತಾರೆ. ಈ ಕೋವಿಡ್-19 ನಿಯಮಗಳ ಉಲ್ಲಂಘನೆ ಮಾಡಿದವರ ವಿರುದ್ಧ ರಾಜ್ಯದಲ್ಲಿ ಬೆಂಗಳೂರು ನಗರ ಸೇರಿದಂತೆ ಒಟ್ಟು 10 ಕಾನೂನು ರೀತ್ಯಾ ಪ್ರಕರಣಗಳು ದಾಖಲಾಗಿರುತ್ತವೆ.

ಮುಂದುವರೆದು, ಮೊಕದ್ದಮೆಗಳನ್ನು ಹಿಂಪಡೆಯುವ ಸಂಬಂಧ ಸರ್ಕಾರವು ಹೊರಡಿಸಿರುವ ಆದೇಶದ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:12755/2020ನ್ನು ದಾಖಲಾಗಿದ್ದು, ಸದರಿ ರಿಟ್ ಅರ್ಜಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ದಿನಾಂಕ:21.12.2020ರಂದು ತಡೆಯಾಜ್ಞೆಯನ್ನು ನೀಡಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖೆ:699/2016 ಅಶ್ವಿನಿ ಕುಮಾರ್ ಉಪಾಧ್ಯಾಯ V/s ಕೇಂದ್ರ ಸರ್ಕಾರ ಹಾಗೂ ಇತರರು ಅರ್ಜಿಯಲ್ಲಿ ದಿನಾಂಕ:10.08.2021ರಲ್ಲಿ ದಿನಾಂಕ:16.09.2020ರಿಂದ ಮಾಜಿ ಹಾಗೂ ಹಾಲಿ ಜನ ಪ್ರತಿನಿಧಿಗಳ ವಿರುದ್ಧ ದಾಖಲಾಗಿರುವ ಮೊಕದ್ದಮೆಗಳನ್ನು ಹಿಂಪಡೆಯಲು ಇತ್ಯರ್ಥಗೊಂಡ ಹಾಗೂ ಬಾಕಿ ಇರುವ ಪ್ರಕರಣಗಳನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಪರಿಶೀಲಿಸಲು ಮಾರ್ಗಸೂಚಿಗಳೊಂದಿಗೆ ನಿರ್ದೇಶನವನ್ನು ನೀಡಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳು ಬಾಕಿ ಇರುವುದರಿಂದ ಮಾನ್ಯ ನ್ಯಾಯಾಲಯಗಳ ಅಂತಿಮ ಆದೇಶಗಳನ್ನು ನಿರೀಕ್ಷಿಸಲಾಗುತ್ತಿದೆ.

(ಆರಗ ಜ್ಞಾನೇಂದ್ರ)
ಗೃಹ ಸಚಿವರು

**ಹೆಚ್‌ಡಿ 55 ಪಿಸಿಕ್ಯೂ 2021**